# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **262** |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 14.12.2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಯಾವ ರೀತಿಯ ಪ್ರಮಾಣದ ಕೈಗಾರಿಕೆಗಳನ್ನು ಸಣ್ಣ ಕೈಗಾರಿಕೆಗಳೆಂದು ಪರಿಗಣಿಸಲಾಗುವುದು; ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು. ನಿಗದಿಪಡಿಸಿರುವ ಮಾನದಂಡಗಳೇನು; ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಕೈಗೊಂಡಿರುವ ಕ್ರಮಗಳೇನು; | ಭಾರತ ಸರ್ಕಾರದ ಎಂ.ಎಸ್.ಎಂ.ಇ ಮಂತ್ರಾಲಯವು ದಿನಾಂಕ 1/7/2020 ರಿಂದ ಸಣ್ಣ ಕೈಗಾರಿಕೆಗಳಿಗೆ ಹೊಸ. ವ್ಯಾಖ್ಯಾನವನ್ನು ನೀಡಿದ್ದು ಅದು ಈ ಕೆಳಗಿನಂತಿರುತ್ತದೆ.<br><br>ಯಾವ ಉತ್ಪಾದನಾ / ಸೇವಾ ಕೈಗಾರಿಕೆಯು ತನ್ನ ಘಟಕದ ಸ್ಥಾವರ ಮತ್ತು ಯಂತ್ರೋಪಕರಣಗಳಲ್ಲಿ ರೂ.10 ಕೋಟಿಗಿಂತ ಕಡಿಮೆ ಹೂಡಿಕೆ ಮಾಡಿದ್ದು ಮತ್ತು ಆ ಘಟಕದ ವಾರ್ಷಿಕ ವಹಿವಾಟು ರೂ.50 ಕೋಟಿಗಿಂತ ಕಡಿಮೆ ಇದ್ದಲ್ಲಿ ಅದನ್ನು ಸಣ್ಣ ಕೈಗಾರಿಕೆ ಎಂದು ಪರಿಗಣಿಸಲಾಗುತ್ತದೆ.<br><br>ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಅನುಮೋದನೆಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಮಟ್ಟದ ಏಕ ಗವಾಕ್ಷಿ ಸಮಿತಿಯಿಂದ ಪಡೆಯಬೇಕಾಗುತ್ತದೆ.<br><br>ರಾಜ್ಯದಲ್ಲಿ ಸಣ್ಣ ಸಣ್ಣ ಉದ್ಯಮಗಳನ್ನು ತೆರೆಯಲು ಉದ್ಯಮಶೀಲರು ಕನಿಷ್ಟ ಈ ಕೆಳಗಿನ ಮಾರ್ಗಸೂಚಿಯನ್ನು ಅನುಸರಿಸಬೇಕಾಗುತ್ತದೆ.<br><br>1. ಮಾಲೀಕತ್ವ ಉದ್ಯಮ ಸ್ಥಾಪಿಸಲು ಬಯಸುವ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನದಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದಲ್ಲಿ "ಕಾಮನ್ ಅಪ್ಲಿಕೇಷನ್ ಫಾರಂ" ನ್ನು ಭರ್ತಿ ಮಾಡಿ ಅರ್ಜಿಯನ್ನು ಸಂಬಂಧಿಸಿದ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರಕ್ಕೆ ಸಲ್ಲಿಸಬೇಕಾಗುತ್ತದೆ.<br>2. ಜಿಲ್ಲಾ ಕೈಗಾರಿಕಾ ಕೇಂದ್ರವು ಈ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರಗುವ "ಜಿಲ್ಲಾ ಮಟ್ಟದ ಏಕ ಗವಾಕ್ಷಿ ಸಮಿತಿ" ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ತಾತ್ವಿಕ ಅನುಮೋದನಾ ಪತ್ರವನ್ನು ಉದ್ಯಮಶೀಲರಿಗೆ ನೀಡುತ್ತದೆ.<br>3. ನಂತರ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ನಿವೇಶನಕ್ಕೆ ಅರ್ಜಿ ಸಲ್ಲಿಸಿ ನಿವೇಶನವನ್ನು ಪಡೆದುಕೊಳ್ಳಬೇಕಾಗುತ್ತದೆ. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನವಾದಲ್ಲಿ ಅದಕ್ಕೆ ಸಂಬಂಧಿಸಿದ ಸಮಿತಿಯು ನಿವೇಶನವನ್ನು ಹಂಚಿಕೆ ಮಾಡುತ್ತದೆ.<br>4. ಉದ್ಯಮಶೀಲರು ನಿವೇಶನದ ಹಂಚಿಕೆ ಆದ ನಂತರ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಾದ ಹಣಕಾಸಿನ ನೆರವಿಗಾಗಿ ಬ್ಯಾಂಕ್/ ಕೆ.ಎಸ್.ಎಫ್.ಸಿಗೆ ಯೋಜನಾ ವರದಿ ಮತ್ತು ಇತರೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಸಾಲ ಮಂಜೂರಾತಿಯನ್ನು ಪಡೆದುಕೊಳ್ಳಬೇಕಾಗುತ್ತದೆ. |